## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಹೆಚ್.ಶಿವಣ್ಣ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ ಕೆ.ಆರ್.ಪೇಟೆ ಹಾಗೂ ಶ್ರೀ ಎ.ಆರ್.ವೆಂಕಟೇಶ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ ಕೆ.ಆರ್.ಪೇಟೆ, ಇವರುಗಳ ವಿರುದ್ಧದ ಜಂಟಿ ಇಲಾಖಾ ವಿಚಾರಣೆ – ಅಂತಿಮ ದಂಡನಾದೇಶ.

ಓದಲಾಗಿದೆ:-

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಮಂಡ್ಯ ಇವರ ಪತ್ರ ಸಂಖ್ಯೆ:ಉಕಾ1/ಸಿ8/ಇಂ/ವಿವ/29/09-10, ದಿನಾಂಕ: 30.09.2013.
2. ಸರ್ಕಾರದ ಕಾರಣ ಕೇಳುವ ನೋಟೀಸ್ ದಿನಾಂಕ: 20.01.2014
3. ಶ್ರೀ ಹೆಚ್.ಶಿವಣ್ಣ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎ.ಆರ್.ವೆಂಕಟೇಶ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ ಕೆ.ಆರ್.ಪೇಟೆ ರವರುಗಳ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ:28.02.2014
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 02 ಇಎನ್‌ಕ್ಯೂ 2014, ದಿನಾಂಕ: 19.09.2015.
5. ವಿಚಾರಣಾಧಿಕಾರಿಯವರ ವಿಚಾರಣಾ ವರದಿ ದಿನಾಂಕ: 06.03.2016.
6. 2ನೇ ಕಾರಣ ಕೇಳುವ ನೋಟಿಸು ದಿನಾಂಕ: 19.05.2016
7. ಶ್ರೀ ಹೆಚ್.ಶಿವಣ್ಣ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎ.ಆರ್.ವೆಂಕಟೇಶ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ ಕೆ.ಆರ್.ಪೇಟೆ ರವರುಗಳು 2ನೇ ಕಾರಣ ಕೇಳುವ ನೋಟಿಸಿಗೆ ಸಲ್ಲಿಸಿರುವ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ: 11.06.2016.

****

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಮಂಡ್ಯ ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ದಿನಾಂಕ: 30.09.2013ರ ಪತ್ರದಲ್ಲಿ ಶ್ರೀ ಹೆಚ್.ಶಿವಣ್ಣ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎ.ಆರ್.ವೆಂಕಟೇಶ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ ಕೆ.ಆರ್.ಪೇಟೆ ರವರುಗಳು ಕೆ.ಆರ್.ಪೇಟೆ ತಾಲ್ಲೂಕಿನ ಪಿ.ಬಿ.ಮಂಚನಹಳ್ಳಿ ಗ್ರಾಮದಿಂದ ಚಟ್ಟಂಗೆರೆ-ತುಂಡೆಕೆರೆ ಮುಖ್ಯ ರಸ್ತೆ ಅಭಿವೃದ್ಧಿ (ಡಾಂಬರೀಕರಣ) ಕಾಮಗಾರಿಯನ್ನು 2009-10ನೇ ಸಾಲಿನ ಲೆಕ್ಕ ಶೀರ್ಷಿಕೆ 5054ರಡಿ ಡಿ.ಆರ್.ಸಂಖ್ಯೆ:1856/2009-10 ರಲ್ಲಿ ಅಂದಾಜು ಮೊತ್ತ ರೂ. 5.00 ಲಕ್ಷಗಳಿಗೆ ಮಂಜೂರಾಗಿರುವ ಕಾಮಗಾರಿಯನ್ನು ಮಂಜೂರಾದ ಕ್ರಿಯಾ

ಯೋಜನೆಯಂತೆ ನಿರ್ವಹಿಸದೇ ಕರ್ತವ್ಯಲೋಪವೆಸಗಿ ಸರ್ಕಾರಕ್ಕೆ ಆರ್ಥಿಕ ನಷ್ಟವುಂಟು ಮಾಡಿರುವ ಕುರಿತು ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಮಂಡ್ಯ, ರವರು ಸ್ಥಳ ಪರಿಶೀಲನೆ ಮಾಡಿ ಸಲ್ಲಿಸಿರುವ ತನಿಖಾ ವರದಿಯಿಂದ ಕಂಡು ಬಂದಿರುವ ಪ್ರಯುಕ್ತ ಸದರಿ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರನ್ವಯ, ಮೇಲ್ಕಂಡ ಇಬ್ಬರು ಅಧಿಕಾರಿಗಳ ಪೈಕಿ ಶ್ರೀ. ಹೆಚ್.ಶಿವಣ್ಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ, ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸದರಿ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ ದೋಷಾರೋಪಣ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟಿಸನ್ನು ಮೇಲೆ (2) ರಲ್ಲಿ ಓದಲಾದಂತೆ ಜಾರಿ ಮಾಡಲಾಗಿತ್ತು. ಇದಕ್ಕೆ ಅಧಿಕಾರಿ/ನೌಕರರು ಮೇಲೆ ಓದಲಾದ(3) ರಲ್ಲಿ ಅವರ ಲಿಖಿತ ಹೇಳಿಕೆಯನ್ನು ಸಲ್ಲಿಸಿ, ಅವರ ವಿರುದ್ಧದ ಎಲ್ಲಾ ಆರೋಪಗಳನ್ನು ಅಲ್ಲಗಳೆಯುತ್ತಾ, ತಮ್ಮ ಮೇಲಿನ ಉದ್ದೇಶಿತ ಇಲಾಖಾ ವಿಚಾರಣೆಯನ್ನು ಕೈಬಿಡುವಂತೆ ಕೋರಿದ್ದನ್ನು, ಕೂಲಂಕಷವಾಗಿ ಪರಿಶೀಲಿಸಿ, ಸದರಿ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳನ್ನು ಕೈಬಿಡಲು ಸ-ಕಾರಣ/ಸಮಂಜಸ/ತೃಪ್ತಿಕರವಾಗಿಲ್ಲದೆ ಇರುವುದರಿಂದ ಸದರಿ ಆಪಾದಿತರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯೆಯನ್ನು ತಿಳಿಯಲು ವಿವರವಾದ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು, ಮೇಲೆ ಓದಲಾದ (4) ರಲ್ಲಿ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ 13 ಪ್ರಕಾರ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು, ಸದರಿ ನಿಯಮಾವಳಿಗಳ ನಿಯಮ -11 (2) ರನ್ವಯ ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಅದೇ ನಿಯಮಾವಳಿಗಳ ನಿಯಮ-11(5)(ಸಿ)ರ ಪ್ರಕಾರ ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಬೆಂಗಳೂರು, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ಮೇಲೆ ಓದಲಾದ (5) ರಂತೆ ವಿಚಾರಣಾಧಿಕಾರಿಗಳು ದಿನಾಂಕ: 06.03.2016 ರಂದು ವಿಚಾರಣಾ ವರದಿಯನ್ನು ಸಲ್ಲಿಸಿದ್ದು, ವಿಚಾರಣಾ ವರದಿಯಲ್ಲಿ ಆರೋಪಿತ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳು ರುಜುವಾತಾಗಿರುತ್ತವೆ ಎಂದು ವರದಿಸಿರುತ್ತಾರೆ.

ಸದರಿ ಆಪಾದಿತ ಅಧಿಕಾರಿ/ನೌಕರರಿಗೆ ದಂಡನೆ ವಿಧಿಸುವ ಪೂರ್ವದಲ್ಲಿ, ವಿಚಾರಣಾಧಿಕಾರಿಯವರ ವಿಚಾರಣಾ ವರದಿಯೊಂದಿಗೆ 2ನೇ ಕಾರಣ ಕೇಳುವ ನೋಟಿಸನ್ನು ಮೇಲೆ ಓದಲಾದ(6)ರಂತೆ ಜಾರಿ ಮಾಡಲಾಗಿತ್ತು.

ಸದರಿ 2ನೇ ಕಾರಣ ಕೇಳುವ ನೋಟಿಸಿಗೆ ಅಧಿಕಾರಿ/ನೌಕರರು ಮೇಲೆ ಓದಲಾದ (7) ರಂತೆ ಸಲ್ಲಿಸಿರುವ ಲಿಖಿತ ಹೇಳಿಕೆಯ ಪ್ರಮುಖ ಅಂಶಗಳು ಈ ಕೆಳಕಂಡಂತಿರುತ್ತವೆ.

(ಅ) ಕಾರ್ಯಪಾಲಕ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಮಂಡ್ಯ ಇವರು ಸಲ್ಲಿಸಿರುವ ವರದಿಯು ಮಹಜರ್ ವರದಿಯಾಗಿರುವುದಿಲ್ಲ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸದರಿಯವರಿಗೆ ಸ್ಥಳ ಪರಿಶೀಲನೆ ನಡೆಸಲು ನೀಡಿದ ಆದೇಶ ದಿನಾಂಕ: 20.12.2012 ರನ್ವಯ, ಕಾರ್ಯಪಾಲಕ ಇಂಜಿನಿಯರ್‌ರವರು ಸದರಿ ವರದಿಯನ್ನು ದಿನಾಂಕ:

18.08.2012 ರಂದು ನಡೆಸಿರುವುದಾಗಿ ದಾಖಲಿಸಿರುತ್ತಾರೆ. ಇದರಿಂದ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಮಂಡ್ಯ ಇವರು ಆದೇಶ ಮಾಡುವ ಮುನ್ನವೇ ಪರಿಶಿಲನೆ ನಡೆಸಿರುವುದಾಗಿ ದಾಖಲಿಸಿರುವುದನ್ನು ಅವಗಾಹಿಸುವಂತೆ ಹಾಗೂ ಇದೊಂದು ಸೃಷ್ಟಿತ ದಾಖಲೆಯಾಗಿರುತ್ತದೆ.

(ಆ) ವಿಚಾರಣಾಧಿಕಾರಿಯವರು ಪರಿಗಣಿಸಿರುವ ನಿಶಾನೆ–ಪಿ1 ಎಂದು ಗುರುತಿಸಿರುವ ಮಹಜರ್ ವರದಿ ಎನ್ನಲಾದ ಪುರಾವೆಯು ಮಹಜರ್‌ನ್ನು ಎಲ್ಲಿ ಮಾಡಲಾಗಿದೆ, ಯಾರ ಸಮ್ಮುಖದಲ್ಲಿ ಮಾಡಲಾಗಿದೆ, ಮಹಜರ್ ಮಾಡಬೇಕಾದ ಅಂಶಗಳು ಇದರಲ್ಲಿ ಕಂಡು ಬಂದಿರುವುದಿಲ್ಲವೆಂದು, ಮಹಜರ್ ನಡೆಸಿದ ಸ್ಥಳ ಹಾಗೂ ಅಲ್ಲಿ ಹಾಜರಿದ್ದ ಸಾಕ್ಷಿದಾರರ ವಿವರಗಳನ್ನು ನಮೂದಿಸದೇ ಇರುವುದು ಕಂಡು ಬರುತ್ತದೆ.

(ಇ) ಸಾಕ್ಷಿದಾರರು ಕಾಮಗಾರಿಯ ಪ್ರಗತಿಯಾದ ಸಂದರ್ಭದಲ್ಲಿ ಕಾರ್ಯನಿರ್ವಹಿಸುತ್ತಿರಲಿಲ್ಲ ಆದ್ದರಿಂದ ವಾಸ್ತವಾಂಶ ತಿಳಿದಿರುವುದಿಲ್ಲ. ಈ ಕುರಿತು ತಿಳಿದ ಅಧಿಕಾರಿ ಸಿಬ್ಬಂದಿ ವರ್ಗದವರಿಂದ ವಿವರಗಳನ್ನು ಪಡೆದ ಪಕ್ಷದಲ್ಲಿ ವಾಸ್ತವಾಂಶ ಮನವರಿಕೆ ಮಾಡಿಕೊಳ್ಳಬಹುದಾಗಿತ್ತು. ಅಲ್ಲದೇ ಮಹಜರ್ ವರದಿಯನ್ನು ಸ್ಥಳದಲ್ಲಿ ಬರೆದಿರುವುದು ದೃಢಪಡುವುದಿಲ್ಲ. ಮತ್ತು ಅವರು ಸಹಿ ಮಾಡಿದ ಸ್ಥಳದಲ್ಲಿ ಟಿಕಾಣಿ ಸ್ಥಳ ಹಾಗೂ ದಿನಾಂಕ ಮತ್ತು ಮಹಜರ್ ನಡೆಸಲು ಅನುಸರಿಸಬೇಕಾದ ಕ್ರಮವನ್ನು ಅನುಸರಿಸಿರುವುದಿಲ್ಲ.

(ಉ) ಮಾನ್ಯ ವಿಚಾರಣಾಧಿಕಾರಿಗಳು ಪ್ರಕರಣದ ನೈಜಾಂಶವನ್ನು ಪರಿಗಣನೆಗೆ ತೆಗೆದುಕೊಳ್ಳದೇ ನಿಶಾನೆ ಪಿ–1 ಎಂದು ಗುರುತಿಸಿರುವ ಮಹಜರ್ ವರದಿ ಎನ್ನಲಾದ ದಾಖಲೆಯನ್ನು ತಯಾರಿಸಿದವರು ಇಂಜಿನಿಯರ್ ಎಂಬ ಏಕೈಕ ಕಾರಣದಿಂದ ಸದರಿ ವರದಿಯನ್ನು ಅಂಗೀಕರಿಸಿರುವುದು ನಿಯಮಗಳಿಗೆ ವಿರುದ್ಧವಾದ ಕ್ರಮವಾಗಿರುತ್ತದೆ.

(ಊ) ನಿಶಾನೆ ಪಿ–3ನ್ನು ಸಲ್ಲಿಸಬೇಕಾದರೆ ಸಂಬಂದಪಟ್ಟ ಪಿಡಬ್ಲ್ಯೂ–2 ಮತ್ತು ಪಿಡಬ್ಲ್ಯೂ3 ಅವರು ಸ್ಥಳ ಪರಿಶೀಲನೆ ಮಾಡುವುದರ ಜೊತೆಗೆ ಅಂದಾಜು ಪಟ್ಟಿಯ ಪ್ರಕಾರ ಅಳತೆ ಪುಸ್ತಕದಲ್ಲಿ ದಾಖಲಿಸಿರುವ ಪ್ರಕಾರ ಕಾಮಗಾರಿ ನಿರ್ವಹಿಸಲಾಗಿದೆ ಮತ್ತು ತೃಪ್ತಿಕರವಾಗಿ ಪೂರ್ಣಗೊಂಡಿರುವುದಾಗಿ ನಮೂದಿಸಲಾಗಿದೆ. ವಿಚಾರಣಾಧಿಕಾರಿಗಳು ಅವರ ಸ್ವಂತ ಅಭಿಪ್ರಾಯ ಪಟ್ಟಿರುವುದು ದುರುದ್ದೇಶದಿಂದ ಕೂಡಿರುತ್ತದೆ. ಕಾಮಗಾರಿ ಅನುಷ್ಠಾನಗೊಂಡ ಸ್ಥಳ ಕ್ರಿಯಾ ಯೋಜನೆಯ ಪ್ರಕಾರ ಇರುವುದರಿಂದ ಅದನ್ನು ಪ್ರತ್ಯೇಕವಾಗಿ ನಮೂದಿಸುವ ಅಗತ್ಯತೆ ಕಂಡುಬರುವುದಿಲ್ಲ ಎಂಬ ಅಂಶವನ್ನು ವಿಚಾರಣಾಧಿಕಾರಿಯವರು ಮನವರಿಕೆ ಮಾಡಿಕೊಳ್ಳದೇ ಶಿಸ್ತು ಪ್ರಾಧಿಕಾರವನ್ನು ತೃಪ್ತಿಪಡಿಸುವ ಉದ್ದೇಶದಿಂದ ನ್ಯೂನತೆಯಿಂದ ಕೂಡಿದ ನಿರ್ಣಯ ಕೈಗೊಂಡಿರುವುದು ಸ್ವಾಭಾವಿಕ ನ್ಯಾಯತತ್ವಕ್ಕೆ ವಿರುದ್ಧವಾದ ಕ್ರಮವಾಗಿರುತ್ತದೆ.

(ಋ) ರಕ್ಷಣಾ ಸಾಕ್ಷಿದಾರರು ವಾಸ್ತವಿಕಾಂಶವನ್ನು ಅರಿತವರಾಗಿದ್ದು, ಸ್ಥಳೀಯವಾಗಿ ಚುನಾಯಿತ ಪ್ರತಿನಿಧಿಗಳು ಹಾಗೂ ಸಾರ್ವಜನಿಕ ಹಿತಾಸಕ್ತಿಯನ್ನು ಕಾಪಾಡುವ ಹಾಗೂ ಸಾರ್ವಜನಿಕ ಕೆಲಸ ಕಾರ್ಯಗಳ ಉಸ್ತುವಾರಿಯನ್ನು ವಹಿಸುವವರಾಗಿರುತ್ತಾರೆ. ಅಲ್ಲದೇ ಸ್ಥಳೀಯ ವಿದ್ಯಮಾನಗಳನ್ನು ತಿಳಿದವರಾಗಿರುತ್ತಾರೆ. ಇನ್ನೊಬ್ಬ ರಕ್ಷಣಾ ಸಾಕ್ಷಿದಾರರು ಕಾಮಗಾರಿ ನಡೆದ ಸಮಯದಲ್ಲಿ ಕಾರ್ಯಪಾಲಕ ಇಂಜಿನಿಯರ್ ಆಗಿರುವುದರಿಂದ, ಇತರ ಸಾಕ್ಷ್ಯವೂ ನೈಜಾಂಶದಿಂದ ಕೂಡಿರುವುದರ ಜೊತೆಗೆ ವಾಸ್ತವಿಕಾಂಶವನ್ನು ತಿಳಿಸುತ್ತದೆ. ಇಂತಹ ಸಾಕ್ಷ್ಯ ಹಾಗೂ ಅವರ ಹೇಳಿಕೆಯನ್ನು ಒಪ್ಪಲು ಬರುವುದಿಲ್ಲ ಎಂದು ವಿಚಾರಣಾಧಿಕಾರಿಗಳು ನಿರ್ಣಯಕ್ಕೆ ಬಂದಿರುವುದು ಸ್ವಾಭಾವಿಕ ನ್ಯಾಯತತ್ವಕ್ಕೆ

ವಿರುದ್ಧವಾದ ಕ್ರಮವಾಗಿರುತ್ತದೆ. ಆದ್ದರಿಂದ ಸದರಿ ವಿಚಾರಣಾ ವರದಿಯು ತಳ್ಳಿಹಾಕಲು ಅರ್ಹತೆ ಹೊಂದಿರುತ್ತದೆ ಎಂದು ತಮ್ಮ ವಿರುದ್ಧದ ಆರೋಪಗಳಿಂದ ಮುಕ್ತಗೊಳಿಸುವಂತೆ ಕೋರಿರುತ್ತಾರೆ.

ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ; ವಿಚಾರಣಾಧಿಕಾರಿಗಳು ಸಾಕ್ಷಿದಾರರ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಆರೋಪಗಳು ಸಾಬೀತಾಗಿವೆ ಎಂದು ವರದಿ ಸಲ್ಲಿಸಿರುತ್ತಾರೆ. ಸದರಿ ಅರೋಪಗಳಿಗೆ ಸಂಬಂಧಿಸಿದಂತೆ ಮೇಲೆ ತಿಳಿಸಿದಂತೆ ಸದರಿ ಆಪಾದಿತರುಗಳು ತಮ್ಮ ಮೇಲಿನ ಆರೋಪಗಳನ್ನು ಅಲ್ಲಗಳೆದಿದ್ದು ಆದರೆ, ಸದರಿ ಕಾಮಗಾರಿಯನ್ನು ನಿಗಧಿತ ಸ್ಥಳದಲ್ಲಿಯೇ ನಿರ್ವಹಿಸಲಾಗಿದೆ ಎಂಬ ಬಗ್ಗೆ ಯಾವುದೇ ಸಮರ್ಥನೀಯ ದಾಖಲೆಗಳನ್ನು ಸಲ್ಲಿಸಿರುವುದಿಲ್ಲ. ಪ್ರಶ್ನಿತ ಕಾಮಗಾರಿ ಮಂಜೂರಾದ ಸ್ಥಳದಲ್ಲಿ ಕಾಮಗಾರಿ ನಿರ್ವಹಣೆಯಾಗಿಲ್ಲವೆಂದು ಸ್ಥಳ ಪರಿಶೀಲನಾ ಮಹಜರ್ ವರದಿ ನೀಡಿರುವ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ. ವಿಭಾಗ, ಮಂಡ್ಯ ಇವರು ತಿಳಿಸಿರುತ್ತಾರೆ. ಸದರಿ ಪ್ರಕರಣದಲ್ಲಿನ ಸಾಕ್ಷಿದಾರರು ಪ್ರಶ್ನಿತ ಕಾಮಗಾರಿಯನ್ನು ಅಂದಾಜು ಪಟ್ಟಿಯಲ್ಲಿ ನಮೂದಿಸಿರುವ ಸ್ಥಳದಲ್ಲಿ ನಿರ್ವಹಿಸಿರುವುದಿಲ್ಲವೆಂದು ಹೇಳಿಕೆ ನೀಡಿರುತ್ತಾರೆ. ಇಲಾಖಾ ವಿಚಾರಣೆಯಲ್ಲಿ ಪ್ರದರ್ಶಿತ ದಾಖಲೆ ಪಿ.2ರ ಅನುಸಾರ ಅಳತೆ ಪುಸ್ತಕದಲ್ಲಿ ಮಂಜೂರಾದ ಕ್ರಿಯಾ ಯೋಜನೆಯಂತೆ ಕಾಮಗಾರಿ ನಿರ್ವಹಿಸಿರುವ ಬಗ್ಗೆ ಶಾಖಾಧಿಕಾರಿಯವರು ದಾಖಲಿಸಿರುವುದು ಹಾಗೂ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ಅದಕ್ಕೆ ಒಪ್ಪಿ ಸಹಿ ಮಾಡಿರುವುದು ರುಜುವಾತಾಗಿರುತ್ತದೆ. ಆಪಾದಿತರು ಸ್ಥಳೀಯ ಗ್ರಾಮ ಪಂಚಾಯತಿಯ ಉಪಾಧ್ಯಕ್ಷರು ಹಾಗೂ ಸದಸ್ಯರ ಕೋರಿಕೆಯ ಅನುಸಾರ ಕಾಮಗಾರಿ ನಿರ್ವಹಿಸಿರುವ ಬಗ್ಗೆ ತಿಳಿಸಿರುವುದರಿಂದ ಕಾಮಗಾರಿ ಮಂಜೂರಾದ ಅಂದಾಜಿನಂತೆ ಅನುಷ್ಠಾನಗೊಂಡಿಲ್ಲವೆಂಬುದು ಸ್ಪಷ್ಟಪಡುತ್ತದೆ ಹಾಗೂ ಆಪಾದಿತರು ಸದರಿ ಹೇಳಿಕೆಯನ್ನು ಒಪ್ಪಲು ಸಾಧ್ಯವಿರುವುದಿಲ್ಲ.

ಸದರಿ ಪ್ರಶ್ನಿತ ರಸ್ತೆ ಕಾಮಗಾರಿಯನ್ನು ಮಂಜೂರಾದ ಕ್ರಿಯಾ ಯೋಜನೆಯಲ್ಲಿರುವಂತೆ ನಿಗಧಿತ ಸ್ಥಳದಲ್ಲಿ ಅನುಷ್ಠಾನಗೊಳಿಸದಿದ್ದರೂ ಸಹ ಪಿ.ಎಸ್.ಕಾಲೇಜ್ ಇಂಜಿನಿಯರಿಂಗ್, ಮಂಡ್ಯ ಇವರ Third Party Inspection Report ಪ್ರಕಾರ ಕಾಮಗಾರಿಯನ್ನು ಮಂಜೂರಾದ ಅಂದಾಜಿನಂತೆ ನಿರ್ವಹಿಸಿರುವುದು ಹಾಗೂ ಉತ್ತಮ ಗುಣಮಟ್ಟದಿಂದ ಕೂಡಿರುವ ಬಗ್ಗೆ ನೀಡಿರುವ ಸುಳ್ಳು ವರದಿಯನ್ನು ಒಪ್ಪಲು ಸಾಧ್ಯವಿರುವುದಿಲ್ಲ.

ಒಟ್ಟಾರೆ ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆ ಮತ್ತು ಸಾಕ್ಷಿಗಳ ಹೇಳಿಕೆ ಅನುಸಾರ ಇಲಾಖಾ ವಿಚಾರಣೆಯಲ್ಲಿ ಆರೋಪ ಸಾಬೀತಾಗಿರುವುದರಿಂದ ಹಾಗೂ ಆರೋಪಿತ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳನ್ನು ಕೈಬಿಡಲು ಸದರಿಯವರು ಸ್ಪಷ್ಟವಾಗಿ ನೀಡಿರುವ ಲಿಖಿತ ರಕ್ಷಣಾ ಹೇಳಿಕೆಗಳು ತೃಪ್ತಿಕರವಾಗಿಲ್ಲದೆ ಇರುವುದರಿಂದ, ಕಾಮಗಾರಿಯನ್ನು ನಿಗಧಿತ ಸ್ಥಳದಲ್ಲಿ ನಿರ್ವಹಿಸದೇ ಅಳತೆ ಪುಸ್ತಕದಲ್ಲಿ ಸುಳ್ಳು ದಾಖಲೆಗಳನ್ನು ನಮೂದಿಸಿ ಗುತ್ತಿಗೆದಾರರಿಗೆ ಹಣ ಪಾವತಿಸುವ ಮೂಲಕ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ ದುರ್ನಡತೆ ಎಸಗಿರುವುದು ಸ್ಪಷ್ಟವಾಗಿ ಸಾಬೀತಾಗುತ್ತದೆ. ಆದ್ದರಿಂದ ಸಾಬೀತಾದ ಆರೋಪದ ಗಂಭೀರತೆಗೆ ಅನುಗುಣವಾಗಿ ದಂಡನೆಯನ್ನು ವಿಧಿಸಲು ಹಾಗೂ ಕಾಮಗಾರಿಗಳನ್ನು 3ನೇ ವ್ಯಕ್ತಿ ತಪಾಸಣೆ ನಡೆಸಿರುವ ಪಿ.ಎಸ್.ಕಾಲೇಜ್ ಆಫ್ ಇಂಜಿನಿಯರಿಂಗ್ ಮಂಡ್ಯ

ಇವರು ಸುಳ್ಳು ವರದಿ ನೀಡಿರುವುದರಿಂದ ಸದರಿಯವರ ವಿರುದವು ಸಹ ಕ್ರಮ ಕೈಗೊಳ್ಳಲು ಸರ್ಕಾರವು ತೀರ್ಮಾನಿಸಿದೆ. ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ಹೆಚ್.ಶಿವಣ್ಣ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ರವರು ಈಗಾಗಲೇ ಸೇವೆಯಿಂದ ನಿವೃತ್ತಿರಾಗಿರುವುದರಿಂದ ಸದರಿಯವರಿಗೆ ಪ್ರತ್ಯೇಕವಾಗಿ ದಂಡನೆ ವಿಧಿಸಲಾಗುವುದು. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 02 ಇಎನ್‌ಕ್ಯೂ 2014 ಬೆಂಗಳೂರು ದಿನಾಂಕ: 14-11-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಗಾಗಿ ಸರ್ಕಾರವು ಸಾಬೀತಾದ ಆರೋಪದ ಗಂಭೀರತೆ ಅನುಗುಣವಾಗಿ ಶ್ರೀ ಎ.ಆರ್.ವೆಂಕಟೇಶ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ ಕೆ.ಆರ್.ಪೇಟೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು, 1957 ರ ನಿಯಮ 8(iii) ರನ್ವಯ ಕಾಲಿಕ ವೇತನ ಶ್ರೇಣಿಯಲ್ಲಿ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ಹಾಗೂ ಅಂದಾಜು ಮೊತ್ತ ರೂ. 5.00 ಲಕ್ಷಗಳಿಗೆ ಮಂಜೂರಾಗಿದ್ದ ಕೆ.ಆರ್.ಪೇಟೆ ತಾಲ್ಲೂಕಿನ ಪಿ.ಬಿ.ಮಂಚನಹಳ್ಳಿ ಗ್ರಾಮದಿಂದ ಚಟ್ಟಂಗೆರೆ-ತೆಂಡೆಕೆರೆ ಮುಖ್ಯ ರಸ್ತೆ ಅಭಿವೃದ್ಧಿ (ಡಾಂಬರೀಕರಣ) ಕಾಮಗಾರಿಯನ್ನು ಕ್ರಿಯಾ ಯೋಜನೆಯಂತೆ ನಿಗಧಿತ ಸ್ಥಳದಲ್ಲಿ ನಿರ್ವಹಿಸದೇ ಅಳತೆ ಪುಸ್ತಕದಲ್ಲಿ ಸುಳ್ಳು ದಾಖಲೆಗಳನ್ನು ನಮೂದಿಸಿ ಗುತ್ತಿಗೆದಾರರಿಗೆ ಪಾವತಿಸಿರುವ ಮೊತ್ತ ರೂ. 2.50 ಲಕ್ಷಗಳನ್ನು ಶ್ರೀ ಎ.ಆರ್.ವೆಂಕಟೇಶ ಇವರಿಂದ ವಸೂಲು ಮಾಡುವ ದಂಡನೆಯನ್ನು ವಿಧಿಸಿದೆ.

ಸದರಿ ಪ್ರಕರಣದಲ್ಲಿ ಕಾಮಗಾರಿಗಳನ್ನು 3ನೇ ವ್ಯಕ್ತಿ ತಪಾಸಣೆ ನಡೆಸಿ ಸುಳ್ಳು ವರದಿಯನ್ನು ನೀಡಿರುವ ಪಿ.ಎಸ್.ಕಾಲೇಜ್ ಆಫ್ ಇಂಜಿನಿಯರಿಂಗ್ ಮಂಡ್ಯ ಇವರ ವಿರುದ್ಧ ಕ್ರಮ ಜರುಗಿಸುವಂತೆ ಹಾಗೂ ಸದರಿಯವರಿಗೆ ಪಾವತಿಸಲಾದ ಮೊತ್ತವನ್ನು ವಸೂಲು ಮಾಡುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಮಂಡ್ಯ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

14/11/2018

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ.

4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, (ಸೇವೆಗಳು–ಎ&ಸಿ) ವಿಕಾಸಸೌಧ ಬೆಂಗಳೂರು.
7. ಸಂಬಂಧಪಟ್ಟ ಅಧಿಕಾರಿಗಳಿಗೆ
8. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
9. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
10. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.